# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 732
2. ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು)
3. ಉತ್ತರಿಸಬೇಕಾದ ದಿನಾಂಕ : 12-03-2020
4. ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಗುಂಡಾಲ್ ಮತ್ತು ರಾಮನಗುಡ್ಡ ಜಲಾಶಯಗಳಿಗೆ ನದಿಮೂಲದಿಂದ ನೀರು ತುಂಬಿಸುವ ಕಾಮಗಾರಿಗೆ ಅನುಮೋದನೆ ನೀಡಲಾಗಿದೆಯೇ ಹಾಗೂ ಅನುದಾನ ಬಿಡುಗಡೆ ಮಾಡಲಾಗಿದೆಯೇ; (ವಿವರಗಳನ್ನು ಒದಗಿಸುವುದು) | ಹೌದು.<br><br>ಸದರಿ ಕಾಮಗಾರಿಗೆ ದಿನಾಂಕ:14-02-2018 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಪ್ರಸ್ತುತ ಕಾಮಗಾರಿ ಪ್ರಗತಿಯಲ್ಲಿದೆ.<br><br>2019-20ನೇ ಸಾಲಿನಲ್ಲಿ ಸದರಿ ಕಾಮಗಾರಿಗೆ ರೂ.2.00 ಕೋಟಿ ಅನುದಾನವನ್ನು ಕಾವೇರಿ ನೀರಾವರಿ ನಿಗಮದ ವಾರ್ಷಿಕ ಕಾರ್ಯಕ್ರಮ ಪಟ್ಟಿಯಲ್ಲಿ ಒದಗಿಸಲಾಗಿದೆ. |
| ಆ | ಗುಂಡಾಲ್ ಜಲಾಶಯ ಪ್ರವಾಸಿ ತಾಣವೂ ಆಗಿರುವುದರಿಂದ ಈ ಜಲಾಶಯಕ್ಕೆ ನೀರು ತುಂಬಿಸಲು ಹಾಗೂ ಜಲಾಶಯದ ಹಿಂದೆ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಸೂಕ್ತ ಕ್ರಮ ಜರುಗಿಸಲಾಗುವುದೇ; | ಗುಂಡಾಲ್ ಜಲಾಶಯವನ್ನು ಸೌಂದರ್ಯೀಕರಣಗೊಳಿಸುವ ಹಾಗೂ ಉದ್ಯಾನವನ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು 2018-19ನೇ ಸಾಲಿನಲ್ಲಿ ರೂ.83.62 ಲಕ್ಷಗಳ ವೆಚ್ಚದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ. |
| ಇ | ಈ ಹಿಂದೆ ಮಾನ್ಯ ಜಲಸಂಪನ್ಮೂಲ ಸಚಿವರು ಭರವಸೆ ನೀಡಿದ್ದಂತೆ ಗುಂಡಾಲ್ ಜಲಾಶಯದ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಯೋಜನೆ ರೂಪಿಸಿ ಅನುದಾನ ಬಿಡುಗಡೆ ಮಾಡಲಾಗಿತ್ತೇ; ಮಾಡಿದ್ದಲ್ಲಿ, ಯಾವ ಯಾವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ; ಆ ಪೈಕಿ ಬಾಕಿ ಇರುವ ಕಾಮಗಾರಿಗಳು ಯಾವುವು? | ಸದರಿ ಕಾಮಗಾರಿಯಲ್ಲಿ ಪರಿವೀಕ್ಷಣಾ ಮಂದಿರದ ಪಕ್ಕದಲ್ಲಿ ಹಾಗೂ ಗುಂಡಾಲ್ ಎಡದಂಡೆಯ ಏರಿಯ ಕೆಳಪಾರ್ಶ್ವದಲ್ಲಿ ಉದ್ಯಾನವನ ಅಭಿವೃದ್ಧಿಪಡಿಸುವುದು, ಸುತ್ತಲೂ ಫೆನ್ಸಿಂಗ್ ಅಳವಡಿಸಿ, ಗೇಟ್‌ಗಳನ್ನು ಅಳವಡಿಸಲಾಗಿರುತ್ತದೆ. ಅಲ್ಲದೆ ಸೌಂದರೀಕರಣಗೊಳಿಸಲು ಗ್ರೇ-ಕಲರ್ ಸ್ಟೋನ್ ಪಿಲ್ಲರ್ ಮತ್ತು ಪೆರ್‌ಗೋಲ್ ನಿರ್ಮಾಣ ಮಾಡಿ ಆಸನಗಳನ್ನು ಹಾಕಲಾಗಿದೆ. |

*ಸಂಖ್ಯೆ:ಜಸಂಇ 21 ಎಸ್‌ಎಲ್‌ಎ 2020*

(ರಮೇಶ್ ಲ. ಜಾರಕಿಹೊಳಿ)
ಜಲಸಂಪನ್ಮೂಲ ಸಚಿವರು